**ಕರ್ನಾಟಕ ಸರ್ಕಾರ**

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು

**ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003**

ಸಂಖ್ಯೆ: ಕ್ಯು1/ಡಿ.ಎಲ್.ಇಡಿ/ಡಿ.2021/ಮೌ.ಮಾ.&ಇ.ಮಾ./20/2021-22 ದಿನಾಂಕ:25/01/2022

**ಸುತ್ತೋಲೆ**

**ವಿಷಯ:** ಡಿಸೆಂಬರ್-2021 ರ ಮಾಹೆಯಲ್ಲಿ ನಡೆದ ಡಿ.ಇಎಲ್.ಇಡಿ. ಮೂರಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ಡಿಸೆಂಬರ್-2021 ರ ಮಾಹೆಯಲ್ಲಿ ನಡೆದ ಡಿ.ಇಎಲ್.ಇಡಿ ಮೂರಕ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ: 28/01/2022 ರಂದು ಪೂರ್ವಾಹ್ನ 11.00 ಗಂಟೆಗೆ ಮಂಡಳಿಯ ಅಂತರ್ಜಾಲ https://sslc.karnataka.gov.in ದಲ್ಲಿ ಪ್ರಕಟಿಸಲಾಗುವುದು. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. ವಿಶೇಷ ಪರಿಸ್ಥಿತಿಯಲ್ಲಿ ಅಂದರೆ **ಪರೀಕ್ಷೆಯ ದುರಾಚರಣೆ, ವಂಚನೆ, ಅನುಚಿತ ವರ್ತನೆ ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.**

ಡಿಸೆಂಬರ್-2021ರ ಡಿ.ಇಎಲ್.ಇಡಿ ಮೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಗಾಗಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ನಿಗದಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

**ಉತ್ತರಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಈ ಕೆಳಗಿನಂತೆ ದಿನಾಂಕ ನಿಗದಿಪಡಿಸಿದೆ.**

| ವಿವರ | ದಿನಾಂಕ |
|---|---|
| ಡಿಸೆಂಬರ್-2021ರ ಡಿ.ಇಎಲ್.ಇಡಿ ಮೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | **31/01/2022** |
| ಡಿಸೆಂಬರ್-2021ರ ಡಿ.ಇಎಲ್.ಇಡಿ ಮೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | **01/02/2022** |
| ಡಿಸೆಂಬರ್-2021ರ ಡಿ.ಇಎಲ್.ಇಡಿ ಮೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | **07/02/2022** |
| ಡಿಸೆಂಬರ್-2021ರ ಡಿ.ಇಎಲ್.ಇಡಿ ಮೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | **08/02/2022** |

**ಉತ್ತರಪತ್ರಿಕೆಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಸ್ಕ್ಯಾನ್‌ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರು ಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ. ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಗೆ ಹಾಗೂ ಈ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳಿಗೆ ರವಾನಿಸಲಾಗುವುದು. ಹಾಗೂ ಅಂಕಗಳಲ್ಲಿ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಅಭ್ಯರ್ಥಿಗೆ ಹಿಂದಿರುಗಿಸಲಾಗುವುದು.**

**ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ. ಇದಕ್ಕಾಗಿ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ ವಿಳಾಸ https://sslc.karnataka.gov.in ಇಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಅಭ್ಯರ್ಥಿಗಳು ತಮ್ಮ ನೋಂದಣಿ ವಿವರಗಳನ್ನು ಹಾಗೂ ಸ್ಕ್ಯಾನ್‌ಪ್ರತಿ ಪಡೆಯುವ ವಿಷಯಗಳ ಮಾಹಿತಿಯನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿ ಪಡೆಯಲು ಬಯಸುವ ಅಭ್ಯರ್ಥಿಗಳು ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 500/–ಗಳನ್ನು ಆನ್‌ಲೈನ್‌ನಲ್ಲಿಯೇ ಪಾವತಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ಹಾಗೂ ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಅಪ್‌ಲೋಡ್ ಮಾಡಿರುವ ಬಗ್ಗೆ ಅಭ್ಯರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ಮಾಹಿತಿಯನ್ನು ರವಾನಿಸಲಾಗುವುದು. ಹೀಗೆ ಅಪ್‌ಲೋಡ್ ಆದ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ, ಅಪೇಕ್ಷಿಸಿದಲ್ಲಿ ಅಂಕಗಳ ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಉತ್ತರ ಪತ್ರಿಕೆಗಳ ಮರುಎಣಿಕೆಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಮರುಎಣಿಕೆಗಾಗಿ ಅರ್ಜಿಸಲ್ಲಿಸಬಹುದಾಗಿದೆ. ಅಂಕಗಳ ಮರುಎಣಿಕೆಗಾಗಿ ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 150/– ಅನ್ನು ಆನ್‌ಲೈನ್ ಮೂಲಕ ಪಾವತಿಸಬೇಕಾಗುತ್ತದೆ. ಒಂದುವೇಳೆ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಪರಿಷ್ಕೃತ ಅಂಕ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ರವಾನಿಸಲಾಗುವುದು.

**ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿಯನ್ನು ಪಡೆದ ನಂತರ ಅಭ್ಯರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅಪೇಕ್ಷಿಸಿದಲ್ಲಿ, ಆನ್‌ಲೈನ್ ಮೂಲಕ ಒಂದು ವಿಷಯಕ್ಕೆ ಶುಲ್ಕ ರೂ. 800/– ಅನ್ನು ಪಾವತಿಸಬೇಕಿರುತ್ತದೆ. ಒಂದು ವೇಳೆ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಪರಿಷ್ಕೃತ ಅಂಕ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ರವಾನಿಸಲಾಗುವುದು. ಮರುಮೌಲ್ಯಮಾಪನದ ನಂತರ 10 ಅಥವಾ 10ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

**ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಛಾಯಾಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ನಿಗಧಿತ ಶುಲ್ಕವನ್ನು ಅನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಶುಲ್ಕವನ್ನು ಆನ್‌ಲೈನ್‌ನಲ್ಲಿ DEBIT CARD/CREDIT CARD/NET BANKING ಮೂಲಕ ಶುಲ್ಕ ಪಾವತಿಸಬಹುದಾಗಿದೆ.

ಸ್ಕ್ಯಾನ್‌ಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಸಂಬಂಧ ಫ್ಲೋಚಾರ್ಟ್ ಅನ್ನು ಮಂಡಳಿಯ ಜಾಲತಾಣದಲ್ಲಿ ಲಭ್ಯಮಾಡಲಾಗಿದೆ.

| ಶುಲ್ಕದ ವಿವರ | |
|---|---|
| **ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಶುಲ್ಕ ಒಂದು ವಿಷಯಕ್ಕೆ** | **ರೂ. 500/– (ಐದು ನೂರು ರೂಪಾಯಿಗಳು)** |
| **ಮರುಮೌಲ್ಯಮಾಪನ ಶುಲ್ಕ ಒಂದು ವಿಷಯಕ್ಕೆ** | **ರೂ. 800/– (ಎಂಟು ನೂರು ರೂಪಾಯಿಗಳು)** |
| **ಉತ್ತರ ಪತ್ರಿಕೆಗಳ ಮರುಎಣಿಕೆ ಶುಲ್ಕ (ಒಂದು ವಿಷಯಕ್ಕೆ)** | **ರೂ.150/–(ನೂರ ಐವತ್ತು ರೂಪಾಯಿಗಳು)** |

**ಫಲಿತಾಂಶಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚನೆಗಳು:**

➢ ನ್ಯಾಯಾಲಯದ ಪ್ರಕರಣಗಳಿಗೆ ಸಂಬಂಧಿಸಿದಂತೆ "W" ಎಂದು ಹಾಗೂ ಕೆಲವು ಸಂಸ್ಥೆಗಳಲ್ಲಿ ಆಂತರಿಕ ಮತ್ತು ಪ್ರಾಯೋಗಿಕ ಪರೀಕ್ಷೆಗಳು ನಡೆಯದೇ ಡಯಟ್ ಪ್ರಾಂಶುಪಾಲರ ಹಂತದಲ್ಲಿ ತಿರಸ್ಕೃತಗೊಂಡಿರುವುದರಿಂದ ಅಂತಹ

ಸಂಸ್ಥೆಗಳ ಆಂತರಿಕ ಮತ್ತು ಪ್ರಾಯೋಗಿಕ ವಿಷಯಗಳಿಗೆ ಸಂಸ್ಥೆಗಳ ಹಂತದಲ್ಲಿ ಮತ್ತು ಡಯಟ್ ಲಾಗಿನ್‌ನಲ್ಲಿ ಬಾಕಿ ಇರುವ ಪ್ರಕರಣಗಳಿಗೆ "AB" ಎಂದು ನಮೂದಿಸಿ ಫಲಿತಾಂಶವನ್ನು ಪ್ರಕಟಿಸಿದೆ.

- ನಕಲು ವ್ಯವಹಾರದಲ್ಲಿ ತೊಡಗಿದ ಅಭ್ಯರ್ಥಿಗಳ ಫಲಿತಾಂಶಕ್ಕೆ "M" ಎಂದು ದಾಖಲಿಸಿ ಫಲಿತಾಂಶ ಪ್ರಕಟಿಸಲಾಗಿದೆ.
- ಆಂಗ್ಲ ಮಾಧ್ಯಮದ ಅಭ್ಯರ್ಥಿಗಳು ಮಾತ್ರ ಕನ್ನಡ ಮಾಧ್ಯಮದಲ್ಲಿ ಉತ್ತರಿಸಲು ಅವಕಾಶವಿದೆ. ಉಳಿದಂತೆ ಪ್ರವೇಶಪತ್ರದಲ್ಲಿರುವಂತೆ ಅಭ್ಯರ್ಥಿಗಳು ಆಯಾ ಮಾಧ್ಯಮದಲ್ಲಿಯೇ ಪರೀಕ್ಷೆ ಬರೆಯಬೇಕು. ಬೇರೆ ಮಾಧ್ಯಮದಲ್ಲಿ ಪರೀಕ್ಷೆ ಬರೆದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಫಲಿತಾಂಶವನ್ನು "00" ಎಂದು ಪರಿಗಣಿಸಲಾಗಿದೆ.
- **ಒಂದುವೇಳೆ ಯಾವುದಾದರೂ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.**
- ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ (ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ದೃಢೀಕೃತ ಅಂಕಪಟ್ಟಿ) ಸಂಬಂಧಿಸಿದ ಸಂಸ್ಥೆಯ ಮುಖ್ಯಸ್ಥರು **ರೂ. 200/- ದಂಡಶುಲ್ಕವನ್ನು** ಮಂಡಳಿಗೆ ಪಾವತಿಸಲಾಗಿರುವ Neft Challan ಮೂಲ ಪ್ರತಿಯೊಂದಿಗೆ ಸಲ್ಲಿಸತಕ್ಕದ್ದು.
- Non-KSEEB ಅಭ್ಯರ್ಥಿಯ ಫಲಿತಾಂಶ ಪಟ್ಟಿಯಲ್ಲಿ ತಿದ್ದುಪಡಿಗಳಿದ್ದಲ್ಲಿ ಅಗತ್ಯ ಪೂರಕ ದಾಖಲೆಗಳನ್ನು ದೃಢೀಕರಿಸಿ ಸಲ್ಲಿಸಲು ತಿಳಿಸಿದೆ.
- ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.
- ತಮ್ಮ ಸಂಸ್ಥೆಗೆ ಸಂಬಂಧಿಸದೇ ಇರುವ ಅಭ್ಯರ್ಥಿಗಳ ಫಲಿತಾಂಶ ಪಟ್ಟಿ ತಮ್ಮ ಸಂಸ್ಥೆಯ ಲಾಗಿನ್‌ನಲ್ಲಿ ಪ್ರಕಟವಾಗಿದ್ದು ಕಂಡು ಬಂದಲ್ಲಿ, **080-23460525** ದೂರವಾಣಿ ಮೂಲಕ ಮಂಡಳಿಗೆ ತಿಳಿಸುವುದು.

**ಡಿ.ಇಎಲ್.ಇಡಿ ಪೂರಕ ಪರೀಕ್ಷೆಯ ಫಲಿತಾಂಶವನ್ನು** https://sslc.karnataka.gov.in **ಅಂತರ್ಜಾಲದಲ್ಲಿ ದಿನಾಂಕ:-28/01/2022.ರಂದು ಪೂರ್ವಾಹ್ನ 11:00 ಗಂಟೆಯ ನಂತರ ಪ್ರಕಟಿಸಲಾಗುವುದು.**

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ದಿನಾಂಕ:29/01/2022ರಂದು ಸಂಬಂಧಿಸಿದ ಡಿ.ಇಡಿ. ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

**(ಎಂ.ಆರ್. ಮಾರುತಿ)**
**ನಿರ್ದೇಶಕರು**
**(ಇತರೆ ಪರೀಕ್ಷೆಗಳು)**

**ಪ್ರತಿಯನ್ನು:**

1. ರಾಜ್ಯದ ಸಂಬಂಧಿಸಿದ ಡಯಟ್ ಪ್ರಾಂಶುಪಾಲರಿಗೆ ಕಳುಹಿಸುತ್ತಾ, ಆಯಾ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದ ಡಿ.ಇಡಿ ಕಾಲೇಜುಗಳ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ಫಲಿತಾಂಶ ಪಟ್ಟಿ ಸಕಾಲದಲ್ಲಿ ಪಡೆದು ಪ್ರಕಟಿಸುವಂತೆ ಕ್ರಮವಹಿಸುವುದು.
2. ರಾಜ್ಯದ ಎಲ್ಲಾ ಡಿ.ಇಡಿ ಕಾಲೇಜಿನ ಪ್ರಾಂಶುಪಾಲರುಗಳಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಿದೆ.
3. ಕಛೇರಿ ಪ್ರತಿ.